ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 6/4/2021

# ಭೂ ಕಾಯ್ದೆ ತಿದ್ದುಪಡಿ: ಸರ್ಕಾರ ಹೈಕೋರ್ಟ್‌ನಲ್ಲಿ ಸಮರ್ಥನೆ

## ಕೃಷಿ ಪ್ರಗತಿಗೆ, ಬಂಡವಾಳ ಆಕರ್ಷಣೆಗೆ ಈ ಕ್ರಮ

ಬೆಂಗಳೂರು: ಕೃಷಿ ಕ್ಷೇತ್ರದ ಪ್ರಗತಿಗೆ ಹಾಗೂ ಹೆಚ್ಚಿನ ಬಂಡವಾಳ ಆಕರ್ಷಿಸುವ ಉದ್ದೇಶದಿಂದ ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್ ಮುಂದೆ ಬಲವಾಗಿ ಸಮರ್ಥಿಸಿಕೊಂಡಿದೆ.

ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ಮಾಡಿರುವುದನ್ನು ಪ್ರಶ್ನಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತಿತರ ಸಂಘಟನೆಗಳು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ ನೇತೃತ್ವದ ವಿಭಾಗೀಯ ಪೀಠ ಸೋಮವಾರ ವಿಚಾರಣೆ ನಡೆಸಿತು. ಅರ್ಜಿಗಳಿಗೆ ಆಕ್ಷೇಪಣೆ ಸಲ್ಲಿಸಿದ ರಾಜ್ಯ ಸರ್ಕಾರದ ವಕೀಲರು, 1974ರ ಕರ್ನಾಟಕ ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಕಾಯ್ದೆಯ ಸೆಕ್ಷನ್ 79ಎ ಮತ್ತು ಬಿ ಅಡಿ ಭೂ ಖರೀದಿಗೆ ನಿರ್ಬಂಧ ಇರುವ ಕಾರಣ ಕೈಗಾರಿಕೆಗಳಿಗೆ ಹಾಗೂ ಇನ್ನಿತರ ಉದ್ದೇಶಗಳಿಗೆ ಭೂಮಿ ಸಿಗದೆ ತೊಂದರೆ ಉಂಟಾಗುತ್ತಿದೆ. ಹೀಗಾಗಿ, ತಿದ್ದುಪಡಿ ಮಾಡಲಾಗಿದ್ದು, ಆ ಅಧಿಕಾರ ಸರ್ಕಾರಕ್ಕೆ ಇದೆ ಎಂದು ತಿಳಿಸಿದರು.

ಕೃಷಿ ಕ್ಷೇತ್ರದ ಪ್ರಗತಿಗೆ ಹಾಗೂ ಹೆಚ್ಚಿನ ಬಂಡವಾಳ ಆಕರ್ಷಿಸುವ ಉದ್ದೇಶದಿಂದ ತಿದ್ದುಪಡಿ ಮಾಡಲಾಗಿದೆ ಹೊರತು ಶ್ರೀಮಂತರಿಗೆ ಅನುಕೂಲಮಾಡಿಕೊಡುವ ಉದ್ದೇಶದಿಂದ ಅಲ್ಲ. ಅರ್ಜಿದಾರರು ಆರೋಪಿಸಿರುವಂತೆ ತಿದ್ದುಪಡಿಯ ವೇಳೆ ಸಂವಿಧಾನಿಕ ನಿಯಮಗಳು ಉಲ್ಲಂಘನೆಯಾಗಿಲ್ಲ. ಸುಪ್ರೀಂಕೋರ್ಟ್ ತೀರ್ಪುಗಳನ್ನು ಕಡೆಗಣಿಸಿಲ್ಲ. ಸಾಂವಿಧಾನಿಕ ಚೌಕಟ್ಟಿನಲ್ಲಿಯೇ ತಿದ್ದುಪಡಿ ಮಾಡಲಾಗಿದೆ ಎಂದು ತಿಳಿಸಿದರು. ಅದನ್ನು ಪರಿಗಣಿಸಿದ ನ್ಯಾಯಪೀಠ, ಸರ್ಕಾರದ ಆಕ್ಷೇಪಣೆಗೆ ಉತ್ತರ ಸಲ್ಲಿಸುವಂತೆ ಅರ್ಜಿದಾರರಿಗೆ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿತು.